**ಪ್ರಧಾನ ಸಿವಿಲ್ ನ್ಯಾಯಾಧೀಶರು ಹಾಗೂ ಪ್ರ. ದ. ನ್ಯಾ. ದಂಡಾಧಿಕಾರಿಗಳ ನ್ಯಾಯಾಲಯ, ಆನೇಕಲ್.**

| | |
|---|---|
| **ಸಿ.ಸಿ. ನಂ :-** | **970/2017** |
| **ಸಿ.ಡಬ್ಲ್ಯೂ : -16** | **ಪಿ.ಡಬ್ಲ್ಯೂ -03** |
| **ದಿನಾಂಕ :-** | **06.11.2025** |

| | |
|---|---|
| ಹೆಸರು | ಗೋವರ್ಧನ್.ಎನ್. |
| ತಂದೆ/ತಾಯಿ/ಗಂಡನ ಹೆಸರು | ನಾಗಪ್ಪ |
| ವಯಸ್ಸು | 43 ವರ್ಷ |
| ಉದ್ಯೋಗ | ಪೊಲೀಸ್ ನಿರೀಕ್ಷಕರು, ವಿಚಕ್ಷಣಾದಳ, ಮಾನ್ಯ ಉಚ್ಚ ನ್ಯಾಯಾಲಯ, ಬೆಂಗಳೂರು |
| ವಾಸ | ಬೆಂಗಳೂರು |

**ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಪ್ರಾಜ್ಞ ಸ. ಸ. ಅ ರವರಿಂದ**

ಜುಲೈ 2016 ರಿಂದ ಜುಲೈ 2017 ವರೆಗೆ ನಾನು ಆನೇಕಲ್ ಪೊಲೀಸ್ ಠಾಣೆಯಲ್ಲಿ ಪೋಲಿಸ್ ಉಪನಿರೀಕ್ಷಕನಾಗಿ ಕರ್ತವ್ಯ ನಿರ್ವಹಿಸಿರುತ್ತೇನೆ. ದಿನಾಂಕ 01.01.2017 ರಂದು ಹನುಮಾನ್ ಸಿಂಗ್ ರವರಿಂದ ಕಡತವನ್ನು ಮುಂದಿನ ತನಿಖೆಗಾಗಿ ಪಡೆದು ಪರಿಶೀಲಿಸಿ, ನಂತರ ಅದೇ ದಿನ ಅಪಘಾತ ನಡೆದ ಸ್ಥಳಕ್ಕೆ ಭೇಟಿ ನೀಡಿ, ನಂತರ ಮೃತದೇಹವಿದ್ದ ಆನೇಕಲ್ ಸರ್ಕಾರಿ ಆಸ್ಪತ್ರೆಗೆ ಭೇಟಿ ನೀಡಿ ಮೃತ ಲಕ್ಷ್ಮೀನಾರಾಯಣರವರ ಶವ ಪಂಚನಾಮೆಯನ್ನು ಚಾಸಾ-7 ರಿಂದ 12 ರವರ ಸಮಕ್ಷಮ ಮಧ್ಯಾಹ್ನ 12-00 ರಿಂದ 02-00 ಗಂಟೆಯವರೆಗೆ ಮಾಡಿರುತ್ತೇನೆ. ಶವ ಪಂಚನಾಮೆಯನ್ನು ನಿಪಿ-5 ಎಂದು, ಸಾಕ್ಷಿಯ ಸಹಿಯನ್ನು ನಿಪಿ-5(ಎ) ಎಂದು ಗುರುತಿಸಲಾಯಿತು. ನಂತರ ಮೃತರ ಶವ ಪರೀಕ್ಷೆಯನ್ನು ಮಾಡಿಸಿ ಸಂಬಂಧಪಟ್ಟರವರಿಗೆ ಶವವನ್ನು ಹಸ್ತಾಂತರ ಮಾಡಿರುತ್ತೇನೆ. ನಂತರ ಘಟನಾ ಸ್ಥಳಕ್ಕೆ ಭೇಟಿ ನೀಡಿ ಮಧ್ಯಾಹ್ನ 02-45 ರಿಂದ 03-45ರವರೆಗೆ ಚಾಸಾ-3 ಮತ್ತು 4 ರವರ ಸಮಕ್ಷಮ ಸ್ಥಳ ಪಂಚನಾಮೆ ಮಾಡಿ, ಘಟನಾ ಸ್ಥಳದಲ್ಲಿ ಇದ್ದ ಬಸ್ ಸಂಖ್ಯೆ ಕೆಎ-53 ಎಫ್-271 ಬಿಎಂಟಿಸಿ ಬಸ್ ಅನ್ನು ಅಮಾನತ್ತು ಪಡಿಸಿಕೊಂಡಿರುತ್ತೇನೆ. ಸದರಿ ಪಂಚನಾಮೆಯನ್ನು ನಿಪಿ-2 ಎಂದು ಈಗಾಗಲೇ ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿಪಿ-2(ಸಿ) ಎಂದು ಗುರುತಿಸಲಾಯಿತು. ಅದೇ ಸಮಯದಲ್ಲಿ ಸ್ಥಳದ ಕಚ್ಚಾ ನಕಾಶೆಯನ್ನು ತಯಾರಿಸಿರುತ್ತೇನೆ. ಅದನ್ನು ನಿಪಿ-6 ಎಂದು, ಸಾಕ್ಷಿಯ ಸಹಿಯನ್ನು ನಿಪಿ-6(ಎ) ಎಂದು ಗುರುತಿಸಲಾಯಿತು. ನಂತರ ಚಾಸಾ-2 ಮತ್ತು 5 ರವರ ಹೇಳಿಕೆಗಳನ್ನು ಪಡೆದಿರುತ್ತೇನೆ. ನಂತರ ಮುಂದಿನ ತನಿಖೆಗಾಗಿ ಚಾಸಾ-17 ರವರಿಗೆ ಹಸ್ತಾಂತರ ಮಾಡಿರುತ್ತೇನೆ.

**ಪಾಟೀ ಸವಾಲುಃ ಆರೋಪಿ ಪರ ಶ್ರೀ.ಸಿ.ಎಸ್. ವಕೀಲರಿಂದ**

ನಾನು ಹೇಳುವಂತೆ ಮೃತರ ಶವ ತನಿಖೆ ಹಾಗೂ ಸ್ಥಳ ಪಂಚನಾಮೆ ಮಾಡಿಲ್ಲ ಎಂದರೆ ಸರಿಯಲ್ಲ. ಪಂಚರಿಗೆ

ನೋಟೀಸ್ ಕೊಟ್ಟಿಲ್ಲ ಎಂದರೆ ಸರಿಯಲ್ಲ. ನಾನು ಯಾವುದೇ ಬಸ್ ಅನ್ನು ಪಂಚನಾಮೆಯಡಿಯಲ್ಲಿ ಅಮಾನತ್ತು ಪಡಿಸಿಕೊಂಡಿಲ್ಲ ಎಂದರೆ ಸರಿಯಲ್ಲ. ಅದೇ ರೀತಿ ಚಾಸಾ-2 ಮತ್ತು 5 ರವರ ಹೇಳಿಕೆಗಳನ್ನು ಪಡೆದಿಲ್ಲ ಎಂದರೆ ಸರಿಯಲ್ಲ. ಕಚ್ಚಾ ನಕಾಶೆಯಲ್ಲಿ ಸಾಕ್ಷಿದಾರರ ಸಹಿ ಇಲ್ಲ ಎಂದರೆ ಸರಿಯಲ್ಲ. ಇವೆಲ್ಲಾ ದಾಖಲೆಗಳನ್ನು ಸೃಷ್ಟಿ ಮಾಡಿ ಮೃತರ ಕುಟುಂಬಕ್ಕೆ ವಿಮೆ ಪರಿಹಾರ ಸಿಗಲಿ ಎಂದು ಆರೋಪಿಯ ವಿರುದ್ಧ ಸುಳ್ಳು ಪ್ರಕರಣ ಮಾಡಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆಃ ಇಲ್ಲ**

**(ತೆರೆದ ನ್ಯಾಯಾಲಯದಲ್ಲಿ ಉಕ್ತಲೇಖನದ ಮುಖಾಂತರ ಬೆರಳಚ್ಚು ಮಾಡಿಸಿ ಸಾಕ್ಷಿದಾರನಿಗೆ ಓದಿ ಹೇಳಲಾಯಿತು)**

ಓ.ಹೇ.ಕೇ. ಸರಿ ಇದೆ.

**ಪ್ರಧಾನ ಸಿವಿಲ್ ನ್ಯಾಯಾಧೀಶರು ಹಾಗೂ**
**ಪ್ರ.ದ.ನ್ಯಾಯಿಕ.ದಂಡಾಧಿಕಾರಿಗಳು,**
**ಆನೇಕಲ್.**